# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1533 |
| ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 18.03.2021 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ<br>ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

*****

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಆಯವ್ಯಯದಲ್ಲಿ ಕಾಯ್ದಿರಿಸಲಾದ ಹಣವೆಷ್ಟು ಮತ್ತು ಬಿಡುಗಡೆ ಮಾಡಲಾದ ಹಣವೆಷ್ಟು; | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನದ ವಿವರ ಈ ಕೆಳಕಂಡಂತಿದೆ.<br><br>ಆರ್ಥಿಕ ವರ್ಷ \| ಆಯವ್ಯಯದಲ್ಲಿ ಕಾಯ್ದಿರಿಸಲಾದ ಅನುದಾನ (ರೂ.ಕೋಟಿಗಳಲ್ಲಿ) \| ಮಂಡಳಿಗೆ ಬಿಡುಗಡೆ ಮಾಡಿದ ಅನುದಾನ (ರೂ.ಕೋಟಿಗಳ)<br>2017-18 \| 1000.00 \| 500.00 *<br>2018-19 \| 1000.00 \| 1300.00<br>2019-20 \| 1500.00 \| 1125.00<br><br>* 2017-18ನೇ ಸಾಲಿನಲ್ಲಿ ಪರಿಷ್ಕೃತ ಆಯವ್ಯಯದಲ್ಲಿ ಒದಗಿಸಲಾದ ಅನುದಾನ ರೂ.800.00 ಕೋಟಿಗಳು ಸರ್ಕಾರದಿಂದ ಬಿಡುಗಡೆಯಾಗಿದ್ದು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಏಪ್ರಿಲ್-18ರ ಮಾಹೆಯಲ್ಲಿ ರೂ.300.00 ಕೋಟಿಗಳನ್ನು ಖಜಾನೆಯಿಂದ ಡ್ರಾ ಮಾಡಿದ್ದು, 2018-19ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವಾಗಿ ನಮೂದಿಸಲಾಗಿದೆ. |
| ಆ) | ಆಯವ್ಯಯದಲ್ಲಿ ನಿಗದಿಪಡಿಸಿದ ಮೊತ್ತವನ್ನು ಬಿಡುಗಡೆ ಮಾಡದಿರಲು ಕಾರಣಗಳೇನು; | ಕಳೆದ ಮೂರು ವರ್ಷಗಳಲ್ಲಿ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನ ಬಿಡುಗಡೆಯಾಗಿರುವ ವಿವರಗಳು ಈ ಕೆಳಕಂಡಂತಿದೆ:-<br>2017-18ನೇ ಸಾಲಿನಲ್ಲಿ ಆಯವ್ಯಯದಲ್ಲಿ ರೂ.1000 ಕೋಟಿಗಳನ್ನು ನಿಗದಿಪಡಿಸಿದ್ದು, ಆರ್ಥಿಕ ಇಲಾಖೆಯು ಪರಿಷ್ಕೃತ ಆಯವ್ಯಯದಲ್ಲಿ ಸದರಿ ಅನುದಾನವನ್ನು ರೂ.800 ಕೋಟಿಗಳಿಗೆ ಮಿತಿಗೊಳಿಸಿರುವ ಕಾರಣ ರೂ.200 ಕೋಟಿಗಳು ಬಿಡುಗಡೆಯಾಗಿರುವುದಿಲ್ಲ.<br>2018-19ನೇ ಸಾಲಿನ ಆಯವ್ಯಯದಲ್ಲಿ ನಿಗದಿಯಾದ ರೂ.1000 ಕೋಟಿ ಅನುದಾನವನ್ನು ಪೂರ್ಣವಾಗಿ ಮಂಡಳಿಗೆ ಬಿಡುಗಡೆಗೊಳಿಸಲಾಗಿದೆ.<br>2019-20ನೇ ಸಾಲಿನಲ್ಲಿ ಮಂಡಳಿಯಲ್ಲಿ ಲಭ್ಯವಿರುವ ಆರಂಭಿಕ ಶಿಲ್ಕು ಸೇರಿ ಆಯವ್ಯಯದಲ್ಲಿ ನಿಗದಿಯಾದ ಅನುದಾನದಲ್ಲಿ ಮೂರು ಕಂತುಗಳ ಅನುದಾನವನ್ನು ಬಿಡುಗಡೆಗೊಳಿಸಿದ್ದು, ಒಟ್ಟು ಅನುದಾನದಲ್ಲಿ ಶೇ.75 ರಷ್ಟು ಅನುದಾನ ವೆಚ್ಚವಾಗದ ಹಿನ್ನೆಲೆಯಲ್ಲಿ ನಾಲ್ಕನೇ ಕಂತಿನ ಅನುದಾನವು ಬಿಡುಗಡೆಯಾಗಿರುವುದಿಲ್ಲ. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | **ಇದರಿಂದ ಆ ಭಾಗದ ಅಭಿವೃದ್ಧಿಗೆ ತೊಡಕಾಗುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲದಿರಲು ಕಾರಣಗಳೇನು?** | ಆ ಭಾಗದ ಅಭಿವೃದ್ಧಿಗೆ ತೊಡಕಾಗುತ್ತಿರವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಆದರೆ, ಅನುಷ್ಠಾನದಲ್ಲಿ ಉಂಟಾಗುವ ಸಮಸ್ಯೆಗಳು, ಸ್ಥಳದ ಸಮಸ್ಯೆ ಹಾಗೂ ಜನಪ್ರತಿನಿಧಿಗಳು ಪದೇ ಪದೇ ಕಾಮಗಾರಿಗಳ ಬದಲಾವಣೆ ಮುಂತಾದ ಕಾರಣಗಳಿಂದ ಅನುಷ್ಠಾನದಲ್ಲಿ ವಿಳಂಬವಾಗಿರುತ್ತದೆ. |

**ಪಿಡಿಎಸ್ 26 ಹೆಚ್‌ಕೆಡಿ 2021**

**(ಡಾ॥ ನಾರಾಯಣಗೌಡ)**
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.